# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 815

ಸದಸ್ಯರ ಹೆಸರು : ಡಾ: ಎಂ.ಜಿ. ಮುಳೆ (ವಿಧಾನ ಸಭಾ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 15-12-2025

ಉತ್ತರಿಸುವ ಸಚಿವರು : ಮಾನ್ಯ ಇಂಧನ ಸಚಿವರು

***

| | ಪ್ರಶ್ನೆ | ಉತ್ತರ |
|---|---|---|
| ಅ) | ಕೃಷಿಕರು ಕಾಡು ಪ್ರಾಣಿಗಳಿಂದ ತಮ್ಮ ಬೆಳೆಗಳನ್ನು ರಕ್ಷಿಸಲು ಸೋಲಾರ್ ವಿದ್ಯುತ್ ತಂತಿ ಬೇಲಿ ನಿರ್ಮಿಸಲು ಇರುವ ನಿಯಮಾವಳಿಗಳೇನು; (ವಿವರ ಒದಗಿಸುವುದು) | ರಾಜ್ಯದ ವಿದ್ಯುತ್ ಸರಬರಾಜು ಕಂಪನಿಗಳ ವ್ಯಾಪ್ತಿಯಲ್ಲಿ ಸೋಲಾರ್ ವಿದ್ಯುತ್ ತಂತಿ ಬೇಲಿ ನಿರ್ಮಾಣಕ್ಕೆ ಸಂಬಂಧಿಸಿದಂತೆ ಯಾವುದೇ ನಿಯಮಾವಳಿಗಳು ಇರುವುದಿಲ್ಲ. |
| ಆ) | ಆದಾಗ್ಯೂ ಕೆಲವು ರೈತರು ವಾಣಿಜ್ಯ ಉದ್ದೇಶಕ್ಕಾಗಿ ಮತ್ತು ತಮ್ಮ ಸ್ವ ಹಿತಾಸಕ್ತಿಗಾಗಿ ಅಕ್ರಮವಾಗಿ ವಿದ್ಯುತ್ ತಂತಿ ಬೇಲಿಯನ್ನು ನಿರ್ಮಿಸಿರುವುದು ಕಂಡು ಬಂದಿದ್ದು, ಇದರಿಂದಾಗಿ ಕಾಡಿನ ವನ್ಯ ಜೀವಿಗಳಿಗೆ ಮತ್ತು ಮನುಷ್ಯರಿಗೆ ವಿದ್ಯುತ್ ಆಘಾತವಾಗುವ ಸಂಭವವಿದ್ದು, ಈ ನಿಟ್ಟಿನಲ್ಲಿ ಅಕ್ರಮ ವಿದ್ಯುತ್ ತಂತಿ ಬೇಲಿ ನಿರ್ಮಾಣ ಮಾಡಿರುವ ಖಾಸಗಿ ವ್ಯಕ್ತಿಗಳ ವಿರುದ್ಧ ಕ್ರಮ ಕೈಗೊಳ್ಳುವ ಸಕ್ಷಮ ಪ್ರಾಧಿಕಾರ ಯಾವುದು?.(ವಿವರ ನೀಡುವುದು) | ವಿದ್ಯುತ್ ಸರಬರಾಜು ಕಂಪನಿಗಳ ವ್ಯಾಪ್ತಿಯಲ್ಲಿ ಅಕ್ರಮವಾಗಿ ವಿದ್ಯುತ್ ತಂತಿ ಬೇಲಿಯನ್ನು ನಿರ್ಮಿಸಿರುವುದು ಪತ್ತೆಯಾದ ಸಂದರ್ಭಗಳಲ್ಲಿ, ಜಾಗೃತದಳ (Vigilance Wing) ವಿದ್ಯುತ್ ಕಾಯ್ದೆ 2003 ಮತ್ತು ಅನ್ವಯವಾಗುವ ನಿಯಮಾವಳಿಗಳ ಪ್ರಕಾರ ಕ್ರಮ ಕೈಗೊಳ್ಳುತ್ತದೆ. ನೇರ AC ಸಂಪರ್ಕವನ್ನು ಬಳಸಿಕೊಂಡು ನಿರ್ಮಿಸಲಾದ ಅನಧಿಕೃತ ಬೇಲಿಗಳು ಮಾನವ ಜೀವಿತ ಮತ್ತು ವನ್ಯಜೀವಿಗಳಿಗೆ ಗಂಭೀರ ಅಪಾಯವನ್ನುಂಟು ಮಾಡುವ ಹಿನ್ನೆಲೆಯಲ್ಲಿ, ಇಂತಹ ಪ್ರಕರಣಗಳನ್ನು ಜಾಗೃತದಳದ ಅಧಿಕಾರಿಗಳು ಸ್ಥಳದಲ್ಲೇ ಪರಿಶೀಲಿಸಿ, ಕಾನೂನುಬದ್ಧ ಪ್ರಕರಣಗಳನ್ನು ದಾಖಲಿಸುತ್ತಿದೆ, ದಂಡನಾತ್ಮಕ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಮತ್ತು ಅಕ್ರಮ ವಿದ್ಯುತ್ ಸಂಪರ್ಕವನ್ನು ತಕ್ಷಣವೇ ಕಡಿತಗೊಳಿಸುವಂತಹ ಕ್ರಮಗಳನ್ನು ಜರುಗಿಸಲಾಗುತ್ತಿದೆ. |

ಸಂಖ್ಯೆ: ಎನರ್ಜಿ 289 ಇಬಿಎಸ್ 2025

(ಕೆ.ಜೆ.ಜಾರ್ಜ್)
ಇಂಧನ ಸಚಿವರು